<u>ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ., ಹುಣಸೂರು.</u>

# ಸಿ.ಸಿ. ಸಂಖ್ಯೆ: 3416/2022

**ಸಾಕ್ಷಿಯನ್ನು ದಿಃ 09.06.2026 ರಂದು ಕರೆಸಿ ಪ್ರಮಾಣವಚನ ಬೋಧಿಸಲಾಯಿತು.**

| | | |
|---|---|---|
| ಹೆಸರು | ಶ್ರೀಧರ್ H.P | ಸಿ.ಡಬ್ಲ್ಯೂಃ **01** ಪಿ.ಡಬ್ಲ್ಯೂಃ **3** |
| ತಂದೆಯ ಹೆಸರು | ಲೇಟ್ H.D. ಪೊನ್ನಸ್ವಾಮಿ ಪಿಳ್ಳೆ | |
| ವಯಸ್ಸು | **46** ವರ್ಷ | |
| ಕೆಲಸ | ಸಾಮಿಲ್ ಕೆಲಸ | |
| ವಾಸಸ್ಥಳ | ಗಣೇಶನಗುಡಿ ಬೀದಿ, ಹುಣಸೂರು | |

<u>ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ ಸಿ.ಆರ್.ಪಿ.ಸಿ ಕಾಯ್ದೇ ಕಲಂ 299 ರೀತ್ಯಾ</u>

ಆರೋಪಿ ಗೊತ್ತು. ನನ್ನ ಹಾಗೂ ಆರೋಪಿ ಮಧ್ಯೆ ಯಾವುದೇ ಗಲಾಟೆ ಆಗಿಲ್ಲ. ಆರೋಪಿತರು ನನ್ನನ್ನು ಅಡ್ಡಗಟ್ಟಿ ನನಗೆ ಕೈಯಿಂದ ಹಲ್ಲೆ ಮಾಡಿಲ್ಲ. ಅವಾಚ್ಯ ಶಬ್ದಗಳಿಂದ ಬೈದಿಲ್ಲ. ಪ್ರಾಣ ಬೆದರಿಕೆ ಹಾಕಿಲ್ಲ. ನಾನು ಪೋಲೀಸರಿಗೆ ದೂರು ನೀಡಿಲ್ಲ. ಸಾಕ್ಷಿ ಸಿಸಿ ನಂ. 282/2017 ರಲ್ಲಿ ನಿಪಿ-2 ರಂತೆ ಗುರುತಿಸಲಾದ ದೂರಿನಲ್ಲಿ ತನ್ನ ಸಹಿಯನ್ನು ಗುರುತಿಸಿದ್ದು, ಸದರಿ ದಾಖಲೆಯನ್ನು ಈ ಪ್ರಕರಣದಲ್ಲಿ ನಿಪಿ-5 ಎಂದು, ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು.

ಸಾಕ್ಷಿ ನಿಪಿ-3ರ ಮಹಜರಿನಲ್ಲಿ ತನ್ನ ಸಹಿಯನ್ನು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ಅದರಲ್ಲಿ ಏನು ಬರೆದಿದೆ ಬೇರೆ ಯಾರು ಸಹಿ ಮಾಡಿದ್ದಾರೆ ಎಂದು ಗೊತ್ತಿಲ್ಲ. ನಿಪಿ.3 ಕ್ಕೆ ಪೊಲೀಸ್ ಠಾಣೆಯಲ್ಲಿ 12 ವರ್ಷಗಳ ಹಿಂದೆ ಸಹಿ ಮಾಡಿದ್ದೇನೆ.

**(ಈ ಹಂತದಲ್ಲಿ ಮಾನ್ಯ ಸಅಅ ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿ ತನ್ನ ಸಾಕ್ಷ್ಯವನ್ನು ಅಭಿಯೋಜನೆಗೆ ಪ್ರತಿಕೂಲವಾಗಿ ನುಡಿದಿರುವ ಕಾರಣ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಸಲಾಯಿತು)**

## <u>ಪಾಟೀಸವಾಲುಃ ಮಾನ್ಯ ಸಸಅ ರವರಿಂದಃ</u>

ದಿಃ 02.09.2016ರಂದು ಬೆಳಿಗ್ಗೆ 9.30ರ ಸಮಯದಲ್ಲಿ ಆರೋಪಿತರು ಅರ್ಧಕ್ಕೆ ನಿಲ್ಲಿಸಿದ ಹೊಸಮನೆಯ ಕಾಲಾವಧಿ ಮರಗಳನ್ನು ಕಿತ್ತು ಹಾಕುತ್ತಿದ್ದಾಗ, ನಾನು

ಏಕೆ ಈ ರೀತಿ ಮಾಡುತ್ತಿದ್ದೀರಾ ಎಂದು ಕೇಳಿದಾಗ 1ನೇ ಆರೋಪಿ ನನ್ನನ್ನು ಅಡ್ಡಗಟ್ಟಿ ಎಳೆದಾಡಿ ಅವಾಚ್ಯ ಶಬ್ದಗಳಿಂದ ಬೈದರು ಎಂದರೆ ಸರಿಯಲ್ಲ. 2ನೇ ಆರೋಪಿ ನನಗೆ ಕೈಯಿಂದ ಎದೆಗೆ ಹಾಗೂ ಮೈಕೈಗೆ ಹೊಡೆದರು ಎಂದರೆ ಸರಿಯಲ್ಲ. 1 ಹಾಗೂ 2ನೇ ಆರೋಪಿತರು ನನಗೆ ನಿನ್ನನ್ನು ಕೊಲೆ ಮಾಡಿದರೆ ಈ ಮನೆ ನಮಗೆ ಸಿಗುತ್ತದೆ ಎಂದು ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. 3ನೇ ಆರೋಪಿ ನನಗೆ ಕೈಯಿಂದ ಮೈಕೈಗೆ ಹೊಡೆದು ಮನೆಯಿಂದ ಹೊರಗೆ ಹಾಕಿರುತ್ತಾರೆ ಎಂದರೆ ಸರಿಯಲ್ಲ.

ದಿಃ 09.09.2016 ರಂದು ನಾನು ಹಾಜರಿದ್ದು ಸ್ಥಳ ತೋರಿಸಿದ ಮೇರೆಗೆ ಪೊಲೀಸರು ಬೆಳಿಗ್ಗೆ 10 ರಿಂದ 11 ಗಂಟೆಯವರೆಗೆ ಚಾಸಾ-2 ಹಾಗೂ 3ರವರ ಸಮಕ್ಷಮ ನಿಪಿ-3ರ ಮಹಜರ್ ಮಾಡಿ ಅದೇ ಸ್ಥಳದಲ್ಲಿ ನನ್ನ ಸಹಿ ಪಡೆದಿದ್ದಾರೆ ಎಂದರೆ ಸರಿಯಲ್ಲ. ನಾನು ಆರೋಪಿತರ ಜೊತೆ ರಾಜಿ ಮಾಡಿಕೊಂಡಿದ್ದೇನೆ ಎಂದರೆ ಸರಿ. ಆದ್ದರಿಂದ ನಾನು ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಇಲ್ಲ.**

**ಮರುವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇದೆ.

(ಅನಿತ)
ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆ.ಎಂ.ಎಫ್.ಸಿ.ಹುಣಸೂರು.